## ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ:428: ಉಖಾಯೋ: 2013

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ, ಸಚಿವಾಲಯ-2,
ಬೆಂಗಳೂರು, ದಿನಾಂಕ:12-09-2013.

## ಸುತ್ತೋಲೆ

**ವಿಷಯ:** ಪ್ರತಿ ತಿಂಗಳು ಕೊನೆಯ ಶನಿವಾರ ರಂದು ಸ್ಯಾಟ್‌ಕಾಂ ಸಂವಾದ/ ತರಬೇತಿಯನ್ನು ಅಥವಾ ವಿಡಿಯೋ ಸಂವಾದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಇಲಾಖಾ ವತಿಯಿಂದ ನಡೆಸುವ ಬಗ್ಗೆ

******

ಪ್ರತಿ ತಿಂಗಳು ಕೊನೆಯ ಶನಿವಾರ ರಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ವಿಶೇಷವಾಗಿ ಕೇಂದ್ರ ಪುರಸ್ಕೃತ ಕಾರ್ಯಕ್ರಮಗಳಾದ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ/ಎನ್.ಆರ್.ಎಲ್.ಎಂ ಯೋಜನೆ, ಕುಡಿಯುವ ನೀರು, ನಿರ್ಮಲ ಭಾರತ ಅಭಿಯಾನ ಜೊತೆಗೆ ರಾಜ್ಯದ ಯೋಜನೆಗಳ ಬಗ್ಗೆ ಸ್ಯಾಟ್‌ಕಾಂ ಮೂಲಕ ತರಬೇತಿ ಕಾರ್ಯಕ್ರಮ ನಡೆಸಲು ರಾಜ್ಯ ಸರ್ಕಾರ ಯೋಜಿಸಿದೆ. ಒಂದುವೇಳೆ ಆ ದಿನವು ಸರ್ಕಾರಿ ರಜೆಯಾಗಿದ್ದಲ್ಲಿ ಮುಂದಿನ ಕೆಲಸದ ದಿನದಂದು ಈ ಸ್ಯಾಟ್‌ಕಾಂ ಅಥವಾ ವಿಡಿಯೋ ಸಂವಾದ ತರಬೇತಿ ಕಾರ್ಯಕ್ರಮವನ್ನು ನಡೆಸಲಾಗುವುದು. ಈ ಕಾರ್ಯಕ್ರಮಕ್ಕೆ ಎಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಯೋಜನೆಗೆ ಸಂಬಂಧಪಟ್ಟ ಉಪ ಕಾರ್ಯದರ್ಶಿಗಳು, ಯೋಜನಾ ನಿರ್ದೇಶಕರುಗಳು, ತಾಲ್ಲೂಕು ಪಂಚಾಯತ್ ಅಧಿಕಾರಿಗಳು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಕಾರ್ಯಪಾಲಕ ಅಭಿಯಂತರರು, ಸಹಾಯಕ ಕಾರ್ಯಪಾಲಕ ಅಭಿಯಂತರರು, ಸಹಾಯಕ ನಿರ್ದೇಶಕರುಗಳು, ಎಂ.ಐ.ಎಸ್ ಕೋ-ಆರ್‌ಡಿನೇಟರ್‌ಗಳು, ಗ್ರಾಮ ಪಂಚಾಯತ್ ಅಧ್ಯಕ್ಷರು, ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಭಾಗವಹಿಸತಕ್ಕದು. ಪ್ರಶ್ನೋತ್ತರ ಹಾಗೂ ಸ್ಪಷ್ಟೀಕರಣಗಳಿಗೆ ಅವಕಾಶ ಮಾಡಿಕೊಡಲಾಗುವುದು. ಈ ಕಾರ್ಯಕ್ರಮಕ್ಕೆ ಬರುವ ಮುನ್ನ ಆಯಾ ಯೋಜನೆಗಳಿಗೆ/ಕಾರ್ಯಕ್ರಮಗಳಿಗೆ ಸಂಬಂಧಪಟ್ಟ ಮಾಹಿತಿ ತರುವುದು ಅಲ್ಲದೆ ವಿಶೇಷವಾಗಿ ಆಯಾ ತಿಂಗಳಲ್ಲಿ ರಾಜ್ಯ ಸರ್ಕಾರವು ನೀಡಿದ ಮಾರ್ಗಸೂಚನೆಗಳು/ಆದೇಶಗಳ ಮಾಹಿತಿ ಮನನ ಮಾಡಿಕೊಂಡು ಬರಲು ಕೋರಿದೆ.

13/9/13
(ಟಿ.ಎಂ.ವಿಜಯ್ ಭಾಸ್ಕರ್)
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗೆ,

1. ರಾಜ್ಯದ ಎಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು/ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
2. ರಾಜ್ಯದ ಎಲ್ಲಾ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು/ಗ್ರಾಮ ಪಂಚಾಯತಿ ಅಧ್ಯಕ್ಷರುಗಳು.
3. ಮಾನ್ಯ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿಗಳಿಗೆ, ಗ್ರಾ.ಅ.&ಪಂ.ರಾಜ್ ಇಲಾಖೆ.
4. ಮಾನ್ಯ ಕಾರ್ಯದರ್ಶಿ (ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿಗಳಿಗೆ ಗ್ರಾ.ಅ.&ಪಂ.ರಾಜ್ ಇಲಾಖೆ.
5. ಆಯುಕ್ತರು, ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ, ಗ್ರಾ.ಅ.&ಪಂ.ರಾಜ್ ಇಲಾಖೆ.

6. ಮಿಷನ್ ಡೈರೆಕ್ಟರ್, ಎನ್.ಆರ್.ಎಲ್.ಎಂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
7. ನಿರ್ದೇಶಕರು/ಪಂಚಾಯತ್‌ರಾಜ್/ಸುವರ್ಣಗ್ರಾಮೋದಯ/ಪಿಎಂಐ/ಕೆ.ಆರ್.ಡಬ್ಲ್ಯೂ.ಎಸ್.ಎಸ್.
8. ಮುಖ್ಯ ಕಾರ್ಯಚರಣೆ ಅಧಿಕಾರಿ (ಮ.ಗಾ.ರಾ.ಗ್ರಾ.ಉ.ಖಾ.ಯೋ) ರವರ ಗ್ರಾ.ಅ.&ಪಂ.ರಾಜ್ -ಇಲಾಖೆ.
9. ಮುಖ್ಯ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ.
10. ಮುಖ್ಯಸ್ಥರು, ಗ್ರಾಮ ಸ್ವರಾಜ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
11. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಮೈಸೂರು.
12. ಕಾರ್ಯಕಾರಿ ನಿರ್ದೇಶಕರು, ಮಹಾತ್ಮಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ, ಜಕ್ಕೂರು ಬೆಂಗಳೂರು.
13. ಅಪರ ಕಾರ್ಯದರ್ಶಿ (ಆಡಳಿತ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
14. ಸಂಪಾದಕರು ಕರ್ನಾಟಕ ವಿಕಾಸ ಹಾಗೂ ಸಾರ್ವಜನಿಕ ಸಂಪರ್ಕಾಧಿಕಾರಿ, ಗ್ರಾ.ಅ.&ಪಂ.ರಾಜ್ ಇಲಾಖೆ.
15. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
16. ಮುಖ್ಯ ಕಾರ್ಯಚರಣಾಧಿಕಾರಿ, ಕರ್ನಾಟಕ ರಾಜ್ಯ ಗ್ರಾಮೀಣ ರಸ್ತೆ, ಅಭಿವೃದ್ಧಿ ಸಂಸ್ಥೆ, ಗ್ರಾಅ&ಪಂರಾಜ್ ಇಲಾಖೆ.
17. ಮುಖ್ಯ ಸಂರಕ್ಷಣಾ ಅಧಿಕಾರಿಗಳು, ಅರಣ್ಯ ಇಲಾಖೆ.
18. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಮೈಸೂರು ಇವರು ಈ ಕಾರ್ಯಕ್ರಮದ ಸಮನ್ವಯತೆಯನ್ನು ಮಾಡಿಕೊಳ್ಳುವುದು.
19. ಶ್ರೀಮತಿ ಹೆಚ್.ಕೆ. ರತಿಕುಮಾರಿ, ಅಧೀಕ್ಷಕರು, ಮ.ಗಾ.ರಾ.ಗ್ರಾ.ಉ.ಖಾ.ಯೋ, ಗ್ರಾ.ಅ.&ಪಂ.ರಾಜ್ ಇಲಾಖೆ.
20. ಶ್ರೀನಿವಾಸ ಮಾರಂಗಪ್ಪನವರ್, ವಿಶೇಷಾಧಿಕಾರಿ, ಕಂಪ್ಯೂಟರ್ ಸೆಲ್, ಎಂ.ಜಿ.ಎನ್.ಆರ್.ಇ.ಜಿ.ಎಸ್ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರು ಇದನ್ನು ವೆಬ್‌ಸೈಟಿನಲ್ಲಿ ಪ್ರಕಟಿಸುವುದು.

ಪ್ರತಿಯನ್ನು:

ಶ್ರೀ ವೈ. ಮಹಾಂಕಾಳಪ್ಪ, ಸಾರ್ವಜನಿಕ ಸಂಪರ್ಕಾಧಿಕಾರಿ, ಗ್ರಾ.ಅ&ಪಂ.ರಾಜ್ ಇಲಾಖೆ ಇವರ ಮಾಹಿತಿಗಾಗಿ. ಮೆ॥ ಇಫೀಯ, ಇವರನ್ನು ಸಂಪರ್ಕಿಸಿ ಈ ಮಾಹಿತಿ www.end2endnrega.in ಮತ್ತು www.rdpr.kar.nic.in ದಲ್ಲಿ ಲಭ್ಯವಿರುತ್ತದೆ.

**100 ದಿನ ಖಾತರಿ ಯೋಜನೆ : ರೂ.174/- ಪ್ರತಿ ದಿನಕ್ಕೆ: ಹೆಣ್ಣು ಗಂಡಿಗೆ**